# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶಂಕರ ಮಳಗಿ, ಹಿಂದಿನ ಪ್ರಭಾರ ಸ.ಕಾ.ಇಂ. ಮತ್ತು ಕುಮಾರಿ ಶಿಲ್ಪಾ, ಹಿಂದಿನ ಕಿರಿಯ ಇಂಜಿನಿಯರ್, ಪಂ.ರಾ.ಇಂ. ಉಪ ವಿಭಾಗ, ಕೊಪ್ಪಳ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಕುರಿತು - ಆದೇಶ.

**ಓದಲಾಗಿದೆ:** 1.ನಿಬಂಧಕರು,ಕರ್ನಾಟಕ ಲೋಕಾಯುಕ್ತ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: Compt/ Uplok/ GLB/ 2328/ 2021/ PO ARE-02, ದಿನಾಂಕ:13.01.2022

2.ಕಂಪ್ಲೆಂಟ್/ಉಪಲೋಕಾ/ಜಿಎಲ್ ಬಿ/2328/2021/ಪಿಓ/ ಎ.ಆರ್.ಇ-2, ದಿನಾಂಕ:31.12.2021

*****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:13.01.2022 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತರವರ ದಿನಾಂಕ:31.12.2021 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಪರಿಶೀಲಿಸಲಾಗಿ, ಕಲಕೇರಿ ಗ್ರಾಮ ಪಂಚಾಯತ್‌ನ 2018-19ನೇ ಸಾಲಿನಲ್ಲಿ ಮಹಾತ್ಮ ಗಾಂಧೀ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಟ್ಟಿ ಗ್ರಾಮದ ಹನುಮಪ್ಪ ಬೆನ್ನಳ್ಳಿ ಮತ್ತು ಬೀರಪ್ಪ ಅಂಗಡಿ ಇವರ ಹೊಲದ ಹತ್ತಿರ ಚೆಕ್ ಡ್ಯಾಂ ನಿರ್ಮಾಣ ಹಾಗೂ ಇತರ 03 ಕಾಮಗಾರಿಗಳು ಸೇರಿದಂತೆ ಒಟ್ಟು 05 ಕಾಮಗಾರಿಗಳಿಗೆ ಸಂಬಂಧಿಸಿದಂತೆ ರೂ 40 ಲಕ್ಷ ಮೊತ್ತದ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ಪಡೆಯಲು ಶ್ರೀ ಶಿವಪ್ಪ ಬಿನ್ ಮಲ್ಲಪ್ಪ ಚರಾರಿ ಹಾಗೂ ಗುತ್ತಿಗೆದಾರರಾದ ಶ್ರೀ ಪಕೀರಪ್ಪ@ಪ್ರಕಾಶ, ಇವರುಗಳು ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ವಿಭಾಗ ಕಛೇರಿ,ಕೊಪ್ಪಳ ಇಲ್ಲಿಗೆ ಭೇಟಿ ನೀಡಿದ್ದು ಸಂದರ್ಭದಲ್ಲಿ ಇಲ್ಲಿ ಪ್ರಭಾರ ಸ.ಕಾ.ಇಂ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಶಂಕರ ಮಳಗಿ ಬಿನ್ ಯರಿಯಪ್ಪ ಮಳಗಿ ಇವರು ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ರೂ.10,000/-ಗಳ ಲಂಚದ ಹಣದ ಬೇಡಿಕೆಯಿಟ್ಟಿದ್ದು ಲಂಚದ ಹಣ ಕೊಡಲು ಇಷ್ಟವಿಲ್ಲದಿರುವುದರಿಂದ ಶ್ರೀ ಶಿವಪ್ಪ ಬಿನ್ ಮಲ್ಲಪ್ಪ ಚರಾರಿ ಇವರು ಭ್ರಷ್ಟಾಚಾರ ನಿಗ್ರಹ ದಳ ಕೊಪ್ಪಳ ಠಾಣೆಯಲ್ಲಿ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ದೂರು ನೀಡಿರುತ್ತಾರೆ. ಸದರಿ ದೂರಿನ ಮೇರೆಗೆ ಕೊಪ್ಪಳ ಎಸಿಬಿ ಪೋಲಿಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ:08/2018 ಕಲಂ 7,13(1)(ಡಿ) ಸಹ ಕಲಂ 13(2) ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988 ರಡಿ ಪ್ರಕರಣ ದಾಖಲಾಗಿರುತ್ತದೆ.

1. ಶ್ರೀ ಶಂಕರ ಮಳಗಿ, ಹಿಂದಿನ ಪ್ರಭಾರ ಸ.ಕಾ.ಇಂ., ಪಂ.ರಾ.ಇಂ. ಉಪವಿಭಾಗ, ಕೊಪ್ಪಳ
2. ಕುಮಾರಿ ಶಿಲ್ಪಾ, ಹಿಂದಿನ ಕಿರಿಯ ಇಂಜಿನಿಯರ್, ಪಂ.ರಾ.ಇಂ. ಉಪವಿಭಾಗ, ಕೊಪ್ಪಳ

ಭ್ರಷ್ಟಾಚಾರ ನಿಗ್ರಹ ದಳ ಕೊಪ್ಪಳ ಪೋಲಿಸ್ ಠಾಣೆಯಲ್ಲಿ ದಾಖಲಾದ ದೂರಿನ ಹಿನ್ನಲೆಯಲ್ಲಿ ಭ್ರಷ್ಟಾಚಾರ ನಿಗ್ರಹ ದಳದ ತನಿಖಾಧಿಕಾರಿಯವರು ಕೈಗೊಂಡ ಟ್ರ್ಯಾಪ್ ಕಾರ್ಯಚರಣೆಯಲ್ಲಿ ಪ್ರಭಾರ ಸ.ಕಾ.ಇಂ. ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಶಂಕರ ಮಳಗಿ ಬಿನ್ ಯರಿಯಪ್ಪ ಮಳಗಿ ಇವರು ರೂ.10,000/-ಗಳ ಲಂಚದ ಹಣವನ್ನು ಒತ್ತಾಯಿಸಿದ್ದು, ಸದರಿ ಹಣವನ್ನು 2ನೇ ಆರೋಪಿತರಾದ

.2

ಶ್ರೀಮತಿ ಶಿಲ್ಪಾ ತಂದೆ ಹನುಮಂತಪ್ಪ ಮುಂದಲಮನಿ, ಕಿರಿಯ ಇಂಜಿನಿಯರ್ ಇವರಿಗೆ ದೂರೂದಾರರಾದ ಶಿವಪ್ಪ ಬಿನ್ ಮಲ್ಲಪ್ಪ ಚರಾರಿ ಇವರು ಹಾಗೂ ಗುತ್ತಿಗೆದಾರರಾದ ಶ್ರೀ ಪಕೀರಪ್ಪ @ ಪ್ರಕಾಶ, ಇವರರುಗಳು ಲಂಚದ ಹಣವನ್ನು ನೀಡಲು ಹೋದಾಗ ಅವರು ಅದನ್ನು ಕಛೇರಿಯ ಕಂಪ್ಯೂಟರ್ ಆಪರೇಟರ್ ಶ್ರೀ ಸತೀಶ್ ರವರಿಗೆ ನೀಡುವಂತೆ ತಿಳಿಸಿದ ಸಂದರ್ಭದಲ್ಲಿ ಸದರಿಯವರು ಲಂಚ ಪಡೆಯುವ ಕಾಲಕ್ಕೆ ಎಸಿಬಿ ಬಲೆಗೆ ಸಿಕ್ಕಿಬಿದ್ದಿರುತ್ತಾರೆ. ಅಪಾದಿತರುಗಳೊಂದಿಗೆ ನಡೆದ ಸಂಭಾಷಣೆಯನ್ನು ದೂರುದಾರರ ಸ್ನೇಹಿತರು ಅವರ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಂಡಿದ್ದು, ಅದನ್ನು ಪ್ಲೇ ಮಾಡಿದಾಗ ಹತ್ತು ಸಾವಿರ ರೂಪಾಯಿ ಲಂಚದ ಹಣಕ್ಕೆ ಒತ್ತಾಯಿಸಿರುವುದು ಕಂಡುಬಂದಿರುತ್ತದೆ.

ತನಿಖಾ ವರದಿಗೆ ದೂರುದಾರರಿಂದ ಆಕ್ಷೇಪಣೆಗಳನ್ನು ಕೇಳಲಾಗಿ ಮೇಲ್ಕಂಡ ಆರೋಪಿತರು ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು, ತಮ್ಮ ವಿರುದ್ಧದ ಆಪಾದನೆಗಳನ್ನು ನಿರಾಕರಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರವರು ಸಲ್ಲಿಸಿರುವ ದಾಖಲಾತಿಗಳು, ತನಿಖಾ ವರದಿ ಮತ್ತು ಆಪಾದಿತರುಗಳ ಆಕ್ಷೇಪಣೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಸದರಿ ಅಪಾದಿತರುಗಳು ಕ್ರಿಯಾಯೋಜನೆಗೆ ಅನುಮೋದನೆಯನ್ನು ನೀಡಲು ರೂ.10,000/-ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ಅಕ್ರಮ ಸಂಭಾವನೆ ಮೊತ್ತವನ್ನು ನೇರವಾಗಿ ಸ್ವೀಕರಿಸದೇ ಕಛೇರಿಯ ಕಂಪ್ಯೂಟರ್ ಆಪರೇಟರ್ ಶ್ರೀ ಸತೀಶ್ ಇವರ ಮೂಲಕ ಪಡೆದಿರುವುದು ಪ್ರಾಥಮಿಕ ತನಿಖೆಯಿಂದ ಕಂಡುಬಂದಿರುತ್ತದೆ ಹಾಗಾಗಿ, ಅಪಾದಿತರುಗಳು ಸರ್ಕಾರಿ ನೌಕರರಾಗಿದ್ದು ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು, ತಮ್ಮ ಕರ್ತವ್ಯ ಪಾಲನೆಯಲ್ಲಿ ಪೂರ್ಣ ಪ್ರಮಾಣದ ನಿಷ್ಠೆ ತೋರದೆ ಕರ್ತವ್ಯ ಲೋಪವೆಸಗಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳ 1966 ರ ನಿಯಮ 3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ ಅವರ ವಿರುದ್ಧ ವಿವರವಾದ ವಿಚಾರಣೆ ನಡೆಸಲು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14ಎ ರನ್ವಯ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣದ ಬಗ್ಗೆ ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರಡಿ ಸಲ್ಲಿಸಿರುವ ವರದಿ ಮತ್ತು ಅದರೊಂದಿಗಿನ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಈ ಪ್ರಕರಣದಲ್ಲಿ ಶ್ರೀ ಶಂಕರ ಮಳಗಿ, ಹಿಂದಿನ ಪ್ರಭಾರ ಸ.ಕಾ.ಇಂ. ಮತ್ತು ಕುಮಾರಿ ಶಿಲ್ಪಾ, ಕಿರಿಯ ಇಂಜಿನಿಯರ್, ಪಂ.ರಾ.ಇಂ. ಉಪವಿಭಾಗ, ಕೊಪ್ಪಳ ಇವರುಗಳು ಅಕ್ರಮ ಸಂಭಾವನೆಯ ಮೊತ್ತವನ್ನು ನೇರವಾಗಿ ಸ್ವೀಕರಿಸದೆ ಅವರ ಕಛೇರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಹೊರಗುತ್ತಿಗೆ ಆಧಾರದ ಸಿಬ್ಬಂದಿಯ ಮೂಲಕ ಪಡೆದುಕೊಂಡಿದ್ದು,ಈ ಆರೋಪವು ಪ್ರಾಥಮಿಕ ತನಿಖೆಯಿಂದ ರುಜುವಾತಾಗಿರುವ ಕಾರಣ ಸದರಿ ಆರೋಪಿತರುಗಳ ವಿರುದ್ಧ ಅಕ್ರಮ ಸಂಭಾವನೆ ಸ್ವೀಕಾರದಂತಹ ಗಂಭೀರ ಆರೋಪವಿರುವುದರಿಂದ ಸದರಿ ಆರೋಪದ ಕುರಿತು ವಿವರವಾದ ಇಲಾಖಾ ವಿಚಾರಣೆಯನ್ನು ಕೈಗೊಳ್ಳುವುದು ಅವಶ್ಯವಿರುತ್ತದೆ.

ಮೇಲ್ಕಂಡ ಆರೋಪಿತರ ಪೈಕಿ ಶ್ರೀ ಶಂಕರ ಮಳಗಿ, ಹಿಂದಿನ ಸ.ಕಾ.ಇಂ. ಇವರು ಮೂಲತ: ಲೋಕೋಪಯೋಗಿ ಇಲಾಖೆಯ ಅಧಿಕಾರಿಯಾಗಿದ್ದು, ದಿನಾಂಕ:31.10.2020 ರಂದು ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಕರ್ನಾಟಕ ನಾಗರಿಕ ಸೇವಾ ನಿಯಮ 214(1)(ಬಿ)(i)ರನ್ವಯ ಹಾಗೂ ಪ್ರಸ್ತುತ ಸೇವೆಯಲ್ಲಿರುವ ಕುಮಾರಿ ಶಿಲ್ಪಾ, ಕಿರಿಯ ಇಂಜಿನಿಯರ್, ಪಂ.ರಾ.ಇಂ. ಉಪವಿಭಾಗ, ಕೊಪ್ಪಳ ಇವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14ಎ ರನ್ವಯ ಪ್ರದತ್ತವಾದ ಅಧಿಕಾರದಡಿ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 07 ಇಎನ್‌ಕ್ಯೂ 2022**
**ಬೆಂಗಳೂರು, ದಿನಾಂಕ: 02.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಶಂಕರ ಮಳಗಿ, ಹಿಂದಿನ ಸ.ಕಾ.ಇಂ, ಪಂ.ರಾ.ಇಂ. ಉಪವಿಭಾಗ, ಕೊಪ್ಪಳ ಇವರು ಸೇವೆಯಿಂದ ನಿವೃತ್ತಿ ಹೊಂದಿದ್ದು

ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ವಿಚಾರಣೆಯನ್ನು ಕೈಗೊಳ್ಳಲು ಕೆ.ಸಿ.ಎಸ್.ಆರ್ ನಿಯಮ 214(2) (ಬಿ) (1) ರನ್ವಯ ಮಂಜೂರಾತಿ ನೀಡಿದೆ ಹಾಗೂ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ-11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿದೆ.

ಮುಂದುವರಿದು ಪ್ರಸ್ತುತ ಸೇವೆಯಲ್ಲಿರುವ ಕುಮಾರಿ ಶಿಲ್ಪಾ ತಂದೆ ಹನುಮಂತಪ್ಪ ಮಂದಲಮನಿ, ಕಿರಿಯ ಇಂಜಿನಿಯರ್ ಪಂ.ರಾ.ಇಂ. ಉಪವಿಭಾಗ, ಕೊಪ್ಪಳ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ-11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ) ರ ಅನುಸಾರ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಕೆ. ನದೀಮ್ 2/3

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್).
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು (ಮೂಲ ದಾಖಲಾತಿಗಳೊಂದಿಗೆ)
3. ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ , ವಿಕಾಸಸೌಧ
5. ಮುಖ್ಯಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ.
7. ಸರ್ಕಾರದ ಅಧೀನ ಕಾರ್ಯದರ್ಶಿ ಲೋಕೋಪಯೋಗಿ ಇಲಾಖೆ (ಸೇವೆಗಳು-ಸಿ) ವಿಕಾಸಸೌಧ,
8. ಸಂಬಂಧಪಟ್ಟ ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಮುಖಾಂತರ

**ಪ್ರತಿ ಮಾಹಿತಿಗಾಗಿ:-**

1. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
2. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
3. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು